**ಸಾಕ್ಷಿಯನ್ನು ದಿಃ 25.05.2026 ರಂದು ಕರೆಸಿ ಪ್ರಮಾಣವಚನ ಭೋದಿಸಲಾಯಿತು.**

**ಮಧ್ಯಂತರ ಅರ್ಜಿ ಆದೇಶದ ಮೇರೆಗೆ ಪಾಟೀ ಸವಾಲುಃ 1 ನೇ ಎದುರುದಾರರ ಪರ ಶ್ರೀ ಎಂ.ಆರ್.ಎಸ್.ಕೆ ವಕೀಲರ ಪರವಾಗಿ ಶ್ರೀ ಎಂ.ಕೆ.ಎಸ್ ವಕೀಲರಿಂದಃ-**

ನನ್ನ ಮುಖ್ಯ ವಿಚಾರಣಾ ಪ್ರಮಾಣ ಪತ್ರದಲ್ಲಿ ಬರೆದಿರುವ ವಿಚಾರಗಳನ್ನು ತಿಳಿದು ಸಹಿ ಮಾಡಿರುತ್ತೇನೆ. ಅಪಘಾತ ಆಯಿತು ಎಂದು ಹೇಳುವ ದಿನ ನಾನು 12.30 ಗಂಟೆ ಸಮಯದಲ್ಲಿ ಪೂರ್ವ ದಿಕ್ಕಿನಿಂದ ಪಶ್ಚಿಮ ದಿಕ್ಕಿನ ಕಡೆ ತಾಲ್ಲೂಕು ಆಫೀಸ್ ನ ಪಕ್ಕ ಹೋಗುತ್ತಿದ್ದೆ ಎನ್ನುತ್ತಾರೆ. ನಾನು ಕೃಷಿಕ ಎಂದು ತೋರಿಸಲು ಯಾವುದೆ ದಾಖಲೆ ಹಾಜರುಪಡಿಸಿಲ್ಲ. ನನ್ನ ಪ್ರಮಾಣ ಪತ್ರದಲ್ಲಿ ತಿಂಗಳಿಗೆ 30 ಸಾವಿರ ಆದಾಯ ಬರುತ್ತದೆ ಎಂದು ತಿಳಿಸಿದ್ದು, ಅದರಂತೆ ನಾನು ಯಾವುದೆ ದಾಖಲೆ ಹಾಜರು ಪಡಿಸಿಲ್ಲ. ಅಪಘಾತ ಆಯಿತು ಎಂದು ಹೇಳಲಾದ ದಿನ ವಾಹನಗಳು ಹೋಗುವ ರಸ್ತೆಯಲ್ಲೆ ಹೋಗುತ್ತಿದ್ದೆ ಎಂದರೆ, ಸಾಕ್ಷಿ ರಸ್ತೆಯ ಪಕ್ಕದಲ್ಲೆ ಹೋಗುತ್ತಿದ್ದೆ ಎನ್ನುತ್ತಾರೆ. ಸದರಿ ರಸ್ತೆಯ ಹತ್ತಿರ ಯಾವುದೆ ಹಂಪ್ಸ್ ಇರಲಿಲ್ಲ, ರಸ್ತೆಯಲ್ಲಿ ಯಾವುದೆ ಜೀಬ್ರಾ ಪಟ್ಟಿಗಳನ್ನು ಹಾಕಿರಲಿಲ್ಲ ಎನ್ನುತ್ತಾರೆ.

ನಾನು 1 ತಿಂಗಳ ಕಾಲ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆದಿದ್ದೇನೆ ಎಂದು ಹೇಳಿದ್ದು, ಆ ಬಗ್ಗೆ ಕೆಲವು ದಾಖಲೆಗಳನ್ನು ಹಾಜರು ಪಡಿಸಿದ್ದೇನೆ, ಇನ್ನೂ ಕೆಲವು ದಾಖಲೆಗಳನ್ನು ಹಾಜರುಪಡಿಸಲು ಆಗಿಲ್ಲ ಎನ್ನುತ್ತಾರೆ. ನಿಪಿ. 16 ರಲ್ಲಿ ಡಿಸ್ಚಾರ್ಜ್ ಸಮ್ಮರಿಯಲ್ಲಿ 5 ದಿನಗಳ ಕಾಲ ಮಾತ್ರ ಚಿಕಿತ್ಸೆ ಪಡೆದ ಬಗ್ಗೆ ನಮೂದು ಇದೆ ಎಂದರೆ ಸಾಕ್ಷಿ 6-7 ದಿನ ಆಸ್ಪತ್ರೆಯಲ್ಲಿ ಇದ್ದೆ ಎನ್ನುತ್ತಾರೆ. ಪರಿಹಾರ ಪಡೆಯುವ ಉದ್ದೇಶದಿಂದ ಕಾರಿನ ಚಾಲಕನ ಮೇಲೆ ಸುಳ್ಳು ದೂರು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಅಪಘಾತಕ್ಕೆ ಕಾರಿನ ಚಾಲಕ ಕಾರಣ ಅಲ್ಲ ಎಂದರೆ ಸರಿಯಲ್ಲ. ಹೆಚ್ಚುವರಿ ಪರಿಹಾರ ಪಡೆಯುವ ಉದ್ದೇಶದಿಂದ ನಾನು ಸುಳ್ಳು ಹೇಳುತ್ತಿದ್ದೇನೆ

ಎಂದರೆ ಸರಿಯಲ್ಲ. ನಿಪಿ. 10 ರಿಂದ 15 ರ ದಾಖಲೆಗಳನ್ನು ಸೃಷ್ಟಿಸಿಕೊಂಡು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇದೆ.,

(ಭಾಗ್ಯಮ್ಮ)

1 ನೇ ಹೆಚ್ಚುವರಿ ಹಿರಿಯ ಸಿವಿಲ್ ಜಡ್ಜ್

ಮತ್ತು ಜೆ.ಎಂ.ಎಫ್.ಸಿ.,ಹುಣಸೂರು.